**ಖೋ ಖೋ ಆಟಗಾರ್ತಿ ಬಿ.ಚೈತ್ರಾ ಚಾಲನೆ** | **ಎಟಿಎಂಇ ಕಾಲೇಜು ವಾರ್ಷಿಕೋತ್ಸವ**

# ವಿದ್ಯಾರ್ಥಿಗಳು, ಸಾರ್ವಜನಿಕರ ಮ್ಯಾರಥಾನ್

■ **ವಿಜಯವಾಣಿ ಸುದ್ದಿಜಾಲ ಮೈಸೂರು**

ನಗರದ ಬನ್ನೂರು ರಸ್ತೆಯಲ್ಲಿರುವ ಎಟಿಎಂಇ ಇಂಜಿನಿಯರಿಂಗ್ ಕಾಲೇಜಿನ ವಾರ್ಷಿಕೋತ್ಸವ 'ಆತ್ಮೀಯ-2ಕೆ25' ಅಂಗವಾಗಿ 'ವೈಕಲ್ಯತೆಯನ್ನು ಮೀರಿದ ಸಾಮರ್ಥ್ಯ' ಎಂಬ ಘೋಷವಾಕ್ಯದೊಂದಿಗೆ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಮ್ಯಾರಥಾನ್ ಓಟವನ್ನು ನಗರದ ಮೈವಿವಿಯ ಓವೆಲ್ ಮೈದಾನದಿಂದ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಭಾರತೀಯ ಮಹಿಳಾ ತಂಡದ ಖೋ ಖೋ ಆಟಗಾರ್ತಿ ಬಿ.ಚೈತ್ರಾ ಅವರು, ನಿರಂತರ ಶ್ರಮ ಮತ್ತು ಪ್ರಯತ್ನದಿಂದ ಜೀವನದಲ್ಲಿ ಅಂದು ಕೊಂಡಿದ್ದನ್ನು ಸಾಧಿಸಬಹುದು. ಗೆದ್ದಾಗ ಬೀಗದೆ, ಸೋತಾಗ ಕುಗ್ಗದೆ ಸೋಲು- ಗೆಲುವನ್ನು ಜೀವನದಲ್ಲಿ ಸಮಾನಾಗಿ ಸ್ವೀಕರಿಸಬೇಕು ಎಂದು ತಿಳಿಸಿದರು. ಎಟಿಎಂಇ ಕಾಲೇಜು ಪ್ರತಿ ವರ್ಷವೂ ಒಂದೊಂದು ಸಾಮಾಜಿಕ ಕಳಕಳಿಯ ಉದ್ದೇಶ ಇಟ್ಟುಕೊಂಡು ವಾರ್ಷಿಕೋತ್ಸವ ಆಚರಿಸುತ್ತಿರುವುದು ಶ್ಲಾಘನೀಯ ಎಂದರು.

ಮೈವಿವಿ ದೈಹಿಕ ಹಾಗೂ ಕ್ರೀಡಾ ವಿಜ್ಞಾನ ವಿಭಾಗದ ನಿರ್ದೇಶಕ ಡಾ.ಸಿ.ವೆಂಕಟೇಶ್ ಮಾತನಾಡಿ, ಕ್ರೀಡೆ ಮತ್ತು ಓಟದಿಂದ ಉತ್ತಮವಾದ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬಹುದು. ಇಂದಿನ ಒತ್ತಡ ಜೀವನದಲ್ಲಿ ಕ್ರೀಡೆ ಮತ್ತು ದೈಹಿಕ ಚಟುವಟಿಕೆ ನಿತ್ಯದ ಮಂತ್ರವಾಗಬೇಕು ಎಂದು ಸಲಹೆ ನೀಡಿದರು. 5.6 ಕಿ.ಮೀ ಮ್ಯಾರಥಾನ್ ಓವೆಲ್ ಮೈದಾನದಿಂದ ಹೊರಟು ನ್ಯಾಯಾಲಯದ ಎದುರಿನ ರಸ್ತೆ ಮೂಲಕ ಸಾಗಿ ಜಯನಗರ ರೈಲ್ವೇ ಸೇತುವೆ, ಸರಸ್ವತಿ ಚಿತ್ರಮಂದಿರ ಮುಂಭಾಗದ ರಸ್ತೆಯ ಮೂಲಕ ಕುಕ್ಕರಹಳ್ಳಿ ಕೆರೆ, ಕಲಾಮಂದಿರದ ಪಕ್ಕದ ರಸ್ತೆಯ ಮೂಲಕ ಹುಣಸೂರು ರಸ್ತೆ ತಲುಪಿ ಹಳೇ ಜಿಲ್ಲಾಧಿಕಾರಿ ಕಚೇರಿ ಮೂಲಕ ಮತ್ತೆ ಓವೆಲ್ ಮೈದಾನದಲ್ಲಿ ಮುಕ್ತಾಯವಾಯಿತು. ಸುಮಾರು 1100 ವಿದ್ಯಾರ್ಥಿಗಳು ಮ್ಯಾರಥಾನ್ ಓಟದಲ್ಲಿ ಭಾಗವಹಿಸಿದ್ದರು.

ವಿದ್ಯಾರ್ಥಿನಿಯರ ವಿಭಾಗದಲ್ಲಿ ಅಪೂರ್ವ (ಸಿವಿಲ್ ವಿಭಾಗ) ಪ್ರಥಮ, ಸ್ಥಾನ ಅಂಕಿತ (ಇಇ ವಿಭಾಗ) ದ್ವಿತೀಯ, ಹರ್ಷಿತಾ (ಸಿ.ಎಸ್ಇ ವಿಭಾಗ) ತೃತಿಯ ಸ್ಥಾನ, ವಿದ್ಯಾರ್ಥಿಗಳ ವಿಭಾಗದಲ್ಲಿ ಕುಶಾಲ್ ಪ್ರಥಮ (ಇಸಿ ವಿಭಾಗ), ಸಿ.ರೇವಂತ್ ದ್ವಿತೀಯ (ಎಐಎಂಎಲ್ ವಿಭಾಗ), ಪವನ್ (ಸಿ.ಎಸ್ ಡಿಸೈನ್ ವಿಭಾಗ) ತೃತಿಯ ಸ್ಥಾನ ಪಡೆದರು. ಅಧ್ಯಾಪಕರ ವಿಭಾಗದಿಂದ ಜಿ.ಎಸ್.ನಂದಿನಿ ಪ್ರಥಮ, ಮೈತ್ರಿ ದ್ವಿತೀಯ, ಕಾವ್ಯಶ್ರೀ ಮೂರನೇ ಸ್ಥಾನ ಪಡೆದರು. ಸಿಬ್ಬಂದಿ ವಿಭಾಗದಲ್ಲಿ ಕೆ.ಮನುಕುಮಾರ್ ಪ್ರಥಮ, ಸತೀಶ್ ದ್ವಿತೀಯ, ಪ್ರೊ.ರಂಗಸ್ವಾಮಿ ತೃತಿಯ ಸ್ಥಾನ ಪಡೆದರು. ಸಾರ್ವಜನಿಕರ ವಿಭಾಗದಲ್ಲಿ ಮಹದೇವಸ್ವಾಮಿ ಪ್ರಥಮ, ಶಶಾಂಕ್ ಕೆ.ಗೌಡ ದ್ವಿತೀಯ, ಆದಿತ್ಯ ತೃತಿಯ ಸ್ಥಾನ ಪಡೆದುಕೊಂಡರು.

ನಂತರ ವಿಜೇತರಿಗೆ ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ವಿತರಿಸಲಾಯಿತು. ಕಾಲೇಜಿನ ಆಡಳಿತ ಮಂಡಳಿ ಕಾರ್ಯದರ್ಶಿ ಕೆ.ಶಿವಶಂಕರ್, ಖಜಾಂಚಿ ಆರ್.ವೀರೇಶ್, ಆಡಳಿತಾಧಿಕಾರಿ ಡಾ.ಸಚ್ಚಿದಾನಂದಮೂರ್ತಿ, ಪ್ರಾಂಶುಪಾಲ ಡಾ.ಎಲ್.ಬಸವರಾಜ್, ಡೀನ್ ಡಾ.ಶ್ರೀನಿವಾಸ, ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ಡಾ.ಪುಟ್ಟೇಗೌಡ, ಪ್ರೊ. ಚಂದ್ರಶೇಖರ್, ಪ್ರೊ. ರೋಹಿತ್, ಪ್ರೊ.ಜಸ್ಲೀನ್, ವಿದ್ಯಾರ್ಥಿ ಸಂಘದ ಸಂತೋಷ್ ಭಾಗವಹಿಸಿದ್ದರು.



**ನಗರದ ಎಟಿಎಂಇ ಇಂಜಿನಿಯರಿಂಗ್ ಕಾಲೇಜಿನ ವಾರ್ಷಿಕೋತ್ಸವ 'ಆತ್ಮೀಯ-2ಕೆ25' ಅಂಗವಾಗಿ 'ವೈಕಲ್ಯತೆಯನ್ನು ಮೀರಿದ ಸಾಮರ್ಥ್ಯ' ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಿದ್ದ ಮ್ಯಾರಥಾನ್‌ನಲ್ಲಿ ಭಾಗವಹಿಸಿದ್ದ ವಿವಿಧ ವಿಭಾಗದ ವಿಜೇತರು.**